278

# ಕರ್ನಾಟಕ ಸರ್ಕಾರದ ನಡವಳಿಗಳು

| | |
|---|---|
| ವಿಷಯ: | ಗಂಗಾವತಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪರಿಷ್ಕೃತ-I) ಸರ್ಕಾರದ ಅಂತಿಮ ಅನುಮೋದನೆ ನೀಡುವ ಸಂಬಂಧ. |
| ಓದಲಾಗಿದೆ: | 1. ಸರ್ಕಾರದ ಆದೇಶ ಸಂಖ್ಯೆ:ನಅಇ 33 ಗುಅಪ್ರಾ: 2009, ಬೆಂಗಳೂರು, ದಿ:18.03.2009.<br>2. ಗಂಗಾವತಿ ನಗರ ಯೋಜನಾ ಪ್ರಾಧಿಕಾರದ ಪತ್ರ ಸಂಖ್ಯೆ:ನಯೋಪ್ರಾಗಂ/ಮಹಾಯೋಜನೆ/2010-11/62, ದಿನಾಂಕ:23.12.2010.<br>3. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತ ಸಂಖ್ಯೆ:ನಗ್ರಾಯೋ:ಉನಿ (ಯೋವಿ):ಗಂಗಾವತಿ:ಮ.ಯೋ:2010-11ರಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ: |

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರಿ ಆದೇಶದಲ್ಲಿ ಗಂಗಾವತಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪರಿಷ್ಕೃತ-I)ಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ ಕ್ರಮಾಂಕ (2)ರ ಪತ್ರದಲ್ಲಿ ಗಂಗಾವತಿ ನಗರ ಯೋಜನಾ ಪ್ರಾಧಿಕಾರವು ಗಂಗಾವತಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆ (ಪ-I) ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1)ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (3)ರ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತದಲ್ಲಿ ಗಂಗಾವತಿ ಪಟ್ಟಣದ ಜನಸಂಖ್ಯೆ 2021ರಲ್ಲಿ 1,80,000ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಗಂಗಾವತಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ 2671.04ಹೆಕ್ಟೇರ್ ಪ್ರದೇಶದಲ್ಲಿ 1961.54 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ (12)ರಲ್ಲಿನ ಅಂಶಗಳನ್ನು ಪರಿಗಣಿಸಿ ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ 1806.02 ಹೆಕ್ಟರ್ ಪ್ರದೇಶದಲ್ಲಿ ವಸತಿಗಾಗಿ 1008.57 ಹೆಕ್ಟೇರ್, (ಶೇ.55.84), ವಾಣಿಜ್ಯಕ್ಕಾಗಿ 135.15 ಹೆಕ್ಟೇರ್ (ಶೇ.7.48), ಕೈಗಾರಿಕೆಗಾಗಿ 156.22 ಹೆಕ್ಟೇರ್ (ಶೇ.8.65), ಸಾರ್ವಜನಿಕ:ಅರೆ

ಸಾರ್ವಜನಿಕ ಉಪಯೋಗಕ್ಕೆ 97.90 ಹೆಕ್ಟೇರ್, (ಶೇ.5.42) ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 148.10 ಹೆಕ್ಟೇರ್ (ಶೇ.8.20) ಹಾಗೂ ಸಾರಿಗೆ/ಸಂಪರ್ಕ ವಲಯಕ್ಕೆ 260.08 ಹೆಕ್ಟೇರ್ (ಶೇಕಡ 14.41), ಪ್ರದೇಶವನ್ನು ನಿಗದಿಪಡಿಸಲಾಗಿದೆ. ಮಹಾಯೋಜನೆ (ಪ-I)ನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಅದ್ದರಿಂದ ಮೇಲೆ ವಿವರಿಸಿರುವ ಅಂಶಗಳನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ನಅಇ 11 ಗುಅಪ್ರಾ 2011</u>**

**<u>ಬೆಂಗಳೂರು, ದಿನಾಂಕ:26.04.2011</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಸರ್ಕಾರವು ಗಂಗಾವತಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿದರುವ ಮಹಾ ಯೋಜನೆ (ಪರಿಷ್ಕೃತ-I)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ 13(3)ರನ್ವಯ ಅಂತಿಮ ಅನುಮೋದನೆ ನೀಡಲಾಗಿದೆ. ಮಹಾಯೋಜನೆ (ಪ-I)ಕ್ಕೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎಂ.ಎಂ.ಹಿರೇಮಠ)**
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

ಇವರಿಗೆ:

1. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೊಜನಾ ಇಲಾಖೆ, ಬೆಂಗಳೂರು.
2. ಸದಸ್ಯ ಕಾರ್ಯದರ್ಶಿಗಳು, ನಗರ ಯೋಜನಾ ಪ್ರಾಧಿಕಾರ, ಗಂಗಾವತಿ.
3. ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಕೊಪ್ಪಳ ಇವರಿಗೆ ಮಾಹಿತಿಗಾಗಿ.
4. ಕರ್ನಾಟಕ ರಾಜ್ಯ ಪತ್ರ.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.